ಅತಿವೃಷ್ಟಿಯಿಂದ ಪ್ರವಾಹದಲ್ಲಿ ಮಡಿದ ಕುಟುಂಬಕ್ಕೆ ಪರಿಹಾರ.

2731: (3734)

ಶ್ರೀ ಹೆಚ್.ಡಿ.ಬಸವರಾಜು (ವಿರಾಜಪೇಟೆ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಈ ಬಾರಿಯ ಅತಿವೃಷ್ಟಿಯಿಂದಾಗಿ ಪ್ರವಾಹದಲ್ಲಿ ಕೊಚ್ಚಿಹೋದ ಕರಡಿಗೋಡುವಿನ 3 ಮಂದಿ ದುರ್ದೈವಿಗಳ ಅವಲಂಬಿತರಿಗೆ ಸೂಕ್ತ ಪರಿಹಾರ ನೀಡಬೇಕೆಂಬ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಬಿ.ಸೋಮಶೇಖರ್ (ಕಂದಾಯ ಸಚಿವರು):

ಅ) ಈ ವಿಚಾರದಲ್ಲಿ ಪರಿಹಾರ ನೀಡಬೇಕೆ ಎಂಬ ಬಗ್ಗೆ ಸ್ಪಷ್ಟೀಕರಣ ತೋರಿರುವ ಪ್ರಸ್ತಾವನೆ ಸರ್ಕಾರಕ್ಕೆ ಬಂದಿದೆ.

ಆ) ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ವಿರಾಜಪೇಟೆ ತಾಲ್ಲೂಕಿನಲ್ಲಿ ಮಾಜೀ ಸೈನಿಕರಿಗಾಗಿ ಮಂಜೂರಾದ ಜಮೀನು

2732: (3736)

ಶ್ರೀ ಹೆಚ್.ಡಿ.ಬಸವರಾಜು (ವಿರಾಜಪೇಟೆ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿರಾಜಪೇಟೆ ತಾಲ್ಲೂಕಿನಲ್ಲಿ ಅನೇಕ ಸೈನಿಕರು ಜಾಗದ ಮಂಜೂರಾತಿಗಾಗಿ ಅರ್ಜಿ ಸಲ್ಲಿಸಿದ್ದು, ಇನ್ನೂ ಮಂಜೂರಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ವಿರಾಜಪೇಟೆ ತಾಲ್ಲೂಕಿನಲ್ಲಿ ಮಾಜೀ ಸೈನಿಕರಿಗಾಗಿ ಸರ್ಕಾರದಿಂದ ಮಂಜೂರಾದ ಜಮೀನಿನ ವಿಸ್ತೀರ್ಣವೆಷ್ಟು, ಎಷ್ಟು ಮಂದಿಗೆ ಮಂಜೂರಾಗಿರುತ್ತದೆ, ಇವರ ಕ್ಷೇಮಾಭಿವೃದ್ಧಿಗೆ ಸರ್ಕಾರ ಕೈಕೊಂಡ ಕ್ರಮಗಳೇನು?

ಶ್ರೀ ಬಿ.ಸೋಮಶೇಖರ್ (ಕಂದಾಯ ಸಚಿವರು):

ಆ) ಹೌದು, 209 ಅರ್ಜಿಗಳು ಸೈನಿಕರು ಮಾಜಿ ಸೈನಿಕರಿಂದ ಸ್ವೀಕೃತವಾಗಿದ್ದು, ಇವುಗಳನ್ನು ಪರಿಶೀಲಿಸಿ, ಅರ್ಹತಾನುಸಾರ ಭೂಮಂಜೂರಾತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಆ) ಇದುವರೆಗೆ 49 ಜನರಿಗೆ 377,67 ಎಕರೆ ಜಮೀನನ್ನು ಮಂಜೂರು ಮಾಡಲಾಗಿದೆ 1969ರ ಕರ್ನಾಟಕ ಭೂಮಂಜೂರಾತಿ ನಿಯಮಾವಳಿಗಳ ನಿಯಮ 5ರಲ್ಲಿ ಶೇ. 10 ಭಾಗದಷ್ಟು ಜಮೀನನ್ನು ಮಾಜಿ ಸೈನಿಕರಿಗೆ: ಸೈನಿಕರಿಗೆ ಹಂಚಿಕೆ ಮಾಡಲು ನಿಯಮಗಳಲ್ಲಿ ಅವಕಾಶ ಕಲ್ಪಿಸಲಾಗಿದೆ.

ರಾಜ್ಯದಲ್ಲಿ ಅತಿವೃಷ್ಟಿಯಿಂದಾದ ಅನಾಹುತ

2736 (3716)

ಶ್ರೀ ಯು.ಬಿ.ಬಣಕಾರ್ (ಹಿರೇಕೆರೂರು): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಇತ್ತೀಚೆಗೆ ಬಿದ್ದ ಭಾರಿ ಮಳೆಯಿಂದ ಸಾರ್ವಜನಿಕರ ಪ್ರಾಣಕ್ಕೆ, ಆಸ್ತಿಗೆ ಜಾನುವಾರುಗಳಿಗೆ, ರಸ್ತೆ, ಕೆರೆಗಳಿಗೆ ಆದ ಹಾನಿಯೆಷ್ಟು? (ಜಿಲ್ಲಾವಾರು ವಿವರ ನೀಡುವುದು)

ಆ) ಅದರ ಪರಿಹಾರಕ್ಕಾಗಿ ಜಿಲ್ಲಾವಾರು ಬಿಡುಗಡೆ ಮಾಡಿದ ಹಣದ ವಿವರ ಹಾಗೂ ಖರ್ಚು ಮಾಡಿದ ಹಣದ ವಿವರ ಒದಗಿಸುವುದು.

ಶ್ರೀ ಬಿ.ಸೋಮಶೇಖರ್ (ಕಂದಾಯ ಸಚಿವರು):

ಅ) ರಾಜ್ಯದಲ್ಲಿ ಅತಿವೃಷ್ಟಿಯಿಂದ ರೂ.797.00 ಕೋಟಿಗಳ ಮೌಲ್ಯದ ಆಸ್ತಿಗಳಿಗೆ ನಷ್ಟವಾಗಿದೆ ಎಂದು ಅಂದಾಜು ಮಾಡಲಾಗಿದೆ. ಜಿಲ್ಲಾವಾರು ವಿವರವನ್ನು ಅನುಬಂಧದಲ್ಲಿ ನೀಡಲಾಗಿದೆ.

ಆ) ವಿವರಗಳನ್ನು ಅನುಬಂಧದಲ್ಲಿ ಒದಗಿಸಿದೆ.